# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 577 ಗ್ರಾಪಂಕಾ 2015, ದಿನಾಂಕ 11.03.2016
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. LOK/DE/70/2016/ARE-8, ದಿನಾಂಕ: 31.10.2017
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 09.11.2017
4) ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 23.12.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 577 ಗ್ರಾಪಂಕಾ 2015, ದಿನಾಂಕ 11.03.2016 ರ ಸರ್ಕಾರದ ಆದೇಶದನ್ವಯ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

**Charge 1:**

DGO granted construction permission dated 16.08.2014 in favour of Smt.Suvrana even though the property over which permission for raising construction was sought did not stand in her name.

**Charge 2:**

DGO in the application dated 13.08.2014 filed by Smt.Suvarna issued the construction permission/licence dated 16.08.2014 to her without publishing notices on the application, calling for objections from the interested persons.

**Charge 3:**

DGO failed to appaise members of the Panchayat Committee that benefit of Basava Vasathi Yojana can not be extended for raising construction over a property not standing in the name of the beneficiary.

and thereby DGO failed to maintain absolute devotion to duty and committed an act which is unbecoming of a Government servant and thus DGO is guilty of misconduct under rule 3(1)(i) to (iii) of KCS (conduct) Rules, 1966

ಮೇಲೆ ಓದಲಾದ (2) ರಲ್ಲಿ ಮಾನ್ಯ ಉಪಲೋಕಾಯುಕ್ತರು–1 ರವರ ದಿನಾಂಕ: 31.10.2017 ರ ವರದಿಯಲ್ಲಿ ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಸದರಿ ನೌಕರರು ದಿನಾಂಕ 30.06.2015 ರಂದು ಸೇವೆಯಿಂದ ನಿವೃತ್ತಿ ಹೊಂದಿದ್ದು, ಅವರಿಗೆ ಪಾವತಿಸಲಾಗುವ ನಿವೃತ್ತ ವೇತನದಲ್ಲಿ ಶೇ.10 ರಷ್ಟನ್ನು ಹತ್ತು ವರ್ಷಗಳ ಅವಧಿಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಪ್ರಕರಣದ ಸಂಬಂಧ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಸದರಿ ನೌಕರರಿಗೆ ಎರಡನೇ ಕಾರಣ ಕೇಳಿ ನೋಟೀಸ್ ನೀಡಲಾಗಿತ್ತು.

ಮೇಲೆ ಓದಲಾದ (4) ರಲ್ಲಿ ರಂದು ಆರೋಪಿತ ನೌಕರರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಆಕ್ಷೇಪಣೆಗಳನ್ನು ಸಲ್ಲಿಸಿದ್ದು, ಸದರಿ ನೌಕರರು ವಿವರವಾದ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು, ಲೋಕಾಯುಕ್ತ ವರದಿಯಲ್ಲಿನ ಆರೋಪಗಳನ್ನು ಅಲ್ಲಗಳೆದಿರುತ್ತಾರೆ. ಶ್ರೀಮತಿ ಸುವರ್ಣ ವಿನೋದ ನಾಯಕ ರವರನ್ನು ಗ್ರಾಮಸಭೆ ಮೂಲಕ ಫಲಾನುಭವಿಯನ್ನಾಗಿ ಆಯ್ಕೆ ಮಾಡಲಾಗಿದ್ದು, ತಾಲ್ಲೂಕು ಪಂಚಯತಿ ಮತ್ತು ಜಿಲ್ಲಾ ಪಂಚಾಯತಿಯಿಂದ ಬಸವ ವಸತಿ ಯೋಜನೆ ನಿಯಮಗಳನ್ವಯ ಅನುಮೋದನೆ ಪಡೆಯಲಾಗಿದೆ. ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ಆಪಾದಿತ ನೌಕರರು ಸಲ್ಲಿಸಿರುವ ಆಕ್ಷೇಪಣೆ/ಹೇಳಿಕೆಯನ್ನು ಪರಿಗಣಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. ತನಿಖಾ ವರದಿಯಲ್ಲಿನ ಅಂಶಗಳ ಬಗ್ಗೆ ಮಾನ್ಯ ಉಪಲೋಕಾಯುಕ್ತರು ಆಪಾದಿತ ನೌಕರರಿಂದ ಆಕ್ಷೇಪಣೆಗಳನ್ನು ಪಡೆಯದೆ ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ಆದುದರಿಂದ ತಮ್ಮ ವಿರುದ್ಧದ ಆಪಾದನೆಯಿಂದ ಮುಕ್ತಗೊಳಿಸುವಂತೆ ಕೋರಿರುತ್ತಾರೆ.

ಸದರಿ ಪ್ರಕರಣದ ಕುರಿತು ವಿಚಾರಣೆ ನಡೆಸಲು ಅಪರ ನಿಬಂಧಕರು ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ ರವರು ಇಲಾಖಾ ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಾಗಿ ಸಮಂಜಸವಾದ ಕಾರಣಗಳೊಂದಿಗೆ ತಿಳಿಸಿರುತ್ತಾರೆ. ಸಂಕ್ಷಿಪ್ತ ವಿವರಣೆ ಕೆಳಗಿನಂತಿದೆ..

> "DGO has not lead any evidence on his behalf. He has not been able to show that he has published norices on the application of Smt. Suvarna. The oral evidence of PW-1 and the documentary evidence clearly establishes that the DGO has not followed the proper legal procedure before granting permission to Smt. Suvarna and hence the charge no.1 and 2 stands proved. Further, the evidence also establishes that the DGO has failed to appraise the members of Panchayat Committee that the benefit of Basava Vasathi Yojna can not be extended for raising construction over a property not standing in the name of the beneficiary. Hence the charge no.3 also stands proved. For the aforesaid reasons, Point no.1 answered in the affirmative."

ಸರ್ಕಾರವು ಪರಿಶೀಲಿಸಿ, ಸದರಿಯವರ ಆಕ್ಷೇಪಣೆಗಳು ಸಮಂಜಸವಾಗಿರುವುದಿಲ್ಲವಾದ್ದರಿಂದ ಹಾಗೂ ಆಪಾದನೆಗಳು ಸಾಬೀತಾಗಿರುವುದಕ್ಕೆ ತನಿಖಾಧಿಕಾರಿಗಳು ಸಮಂಜಸವಾದ ಕಾರಣಗಳನ್ನು ನೀಡಿದ್ದು, ವಿಚಾರಣೆಯಿಂದ ಸಾಬೀತಾಗಿರುವ ಹಿನ್ನೆಲೆಯಲ್ಲಿ, ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಸದರಿ ನೌಕರರಿಗೆ ಪಾವತಿಸಲಾಗುವ ನಿವೃತ್ತ ವೇತನದಲ್ಲಿ ಶೇ.10 ರಷ್ಟನ್ನು ಹತ್ತು ವರ್ಷಗಳ ಅವಧಿಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 822 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 11.04.2018

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214ಎ ರ ಅನುಸಾರ ಸದರಿ ನೌಕರರಿಗೆ ಪಾವತಿಸಲಾಗುವ ನಿವೃತ್ತಿ ವೇತನದಲ್ಲಿ ಶೇ.10 ರಷ್ಟು ಮೊತ್ತವನ್ನು ಹತ್ತು ವರ್ಷಗಳ ಅವಧಿಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

12/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತಿ, ಕಾರವಾರ.
6) ಕಾರ್ಯನಿರ್ವಾಹಕ ಅಧಿಕಾರಿ, ಅಂಕೋಲ ತಾಲ್ಲೂಕು ಪಂಚಾಯತಿ, ಅಂಕೋಲ, ಉತ್ತರ ಕನ್ನಡ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಶ್ರೀ ಡಿ.ವಿ.ನಾಗೇಕರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಭಾವಿಕೇರಿ ಗ್ರಾಮ ಪಂಚಾಯತಿ, ಅಂಕೋಲ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.